ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 16/9/20

ಡೀಮ್ಡ್ ಫಾರೆಸ್ಟ್ ಜಮೀನು ಅರ್ಜಿಗಳು ಇತ್ಯರ್ಥವಾದರೆ ರೈತರು-ಬಡವರಿಗೆ ಭೂ ಒಡೆತನ

# ಡೀಮ್ಡ್ ಫಾರೆಸ್ಟ್ ಜಮೀನಲ್ಲಿ ನಿರ್ವಸಿತರಿಗೆ ವಸತಿ

• ಎಸ್. ಲಕ್ಷ್ಮಿನಾರಾಯಣ

ಬೆಂಗಳೂರು: ಪ್ರವಾಹಕ್ಕೆ ತುತ್ತಾಗುವ ಪ್ರದೇಶಗಳನ್ನು ಗುರುತಿಸಿ ಸಮಸ್ಯೆಗೆ ತುತ್ತಾಗುವ ಕುಟುಂಬಗಳಿಗೆ ಶಾಶ್ವತವಾಗಿ ವಸತಿ ಕಾಲೋನಿ ನಿರ್ಮಿಸಿಕೊಡಲು ಸರ್ಕಾರ ಮುಂದಾಗಿದೆ.

ಡೀಮ್ಡ್ ಫಾರೆಸ್ಟ್ ಎಂದು ಪರಿಗಣಿಸಿರುವ ಜಮೀನಿನ ಪೈಕಿ ಆರು ಲಕ್ಷ ಹೆಕ್ಟೇರ್ ಕಂದಾಯ ಇಲಾಖೆಗೆ ಹಸ್ತಾಂತರಗೊಂಡಲ್ಲಿ ಅದರಲ್ಲಿ 1.50 ಲಕ್ಷ ಹೆಕ್ಟೇರ್ ಜಮೀನು ವಸತಿ ಯೋಜನೆಗೆ ಮೀಸಲಿಡುವ ಬಗ್ಗೆ ಚಿಂತನೆ ನಡೆದಿದೆ.

ಎರಡು ವರ್ಷಗಳಿಂದ ಉತ್ತರ ಕರ್ನಾಟಕ ಭಾಗ ಸೇರಿ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಪ್ರವಾಹ ಉಂಟಾಗಿ 25 ಸಾವಿರ ಕುಟುಂಬಗಳು ಮನೆ ಕಳೆದುಕೊಂಡಿವೆ. ಈಗಿರುವ ಜಾಗದಲ್ಲೇ ಮತ್ತೆ ಮನೆ ನಿರ್ಮಿಸಿದರೂ ಪ್ರವಾಹದಿಂದ ಸಮಸ್ಯೆಯಾಗುವ ಸಾಧ್ಯತೆಗಳೂ ಇವೆ. ಹೀಗಾಗಿ, ಬದಲಿ ಜಾಗದಲ್ಲಿ ವಸತಿ ಕಾಲೋನಿ ಅಥವಾ ವಸತಿ ಸಂಕೀರ್ಣ ನಿರ್ಮಿಸಿ ಶಾಶ್ವತವಾಗಿ ಸಮಸ್ಯೆಗೆ ಪರಿಹಾರ ಕಲ್ಪಿಸುವುದು ಸರ್ಕಾರದ ಉದ್ದೇಶವಾಗಿದೆ.



ಸಾಂದರ್ಭಿಕ ಚಿತ್ರ

ಪ್ರವಾಹಕ್ಕೆ ತುತ್ತಾಗುವ ಗ್ರಾಮಗಳಲ್ಲಿ ಶಾಶ್ವತ ವಸತಿ ಯೋಜನೆಗೆ ಸರ್ಕಾರ ಚಿಂತನೆ

94 ಸಿ, 94 ಸಿಸಿ, ನಮೂನೆ-57 ಅರ್ಜಿಗಳಿಗೂ 'ಮೋಕ್ಷ'

ಜಮೀನು ಕಂದಾಯ ಇಲಾಖೆಗೆ ವರ್ಗವಾದರೆ ಹಸ್ತಾಂತರ

ಜತೆಗೆ ಬಡವರಿಗೆ ಸರ್ಕಾರದಿಂದ ಮನೆ ಹಾಗೂ ನಿವೇಶನ ನೀಡಲು ರಾಜ್ಯಾದ್ಯಂತ ಜಮೀನಿನ ಅವಶ್ಯಕತೆ ಇದ್ದು ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆ ಸುಪರ್ದಿಗೆ ಬರುವ ಜಮೀನಿನಲ್ಲಿ 1.50 ಲಕ್ಷ ಹೆಕ್ಟೇರ್ ವಸತಿ ಉದ್ದೇಶಕ್ಕೆ ಮೀಸಲಿಡಲು ಚರ್ಚೆ ನಡೆದಿದೆ ಎಂದು ಹೇಳಲಾಗಿದೆ.

ಈ ಮಧ್ಯೆ, ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 94 ಎ (4)ಕ್ಕೆ ತಿದ್ದುಪಡಿ ತಂದು ನಮೂನೆ -57 ರಡಿ ಅರ್ಜಿ ಪಡೆದು ಸಾಗುವಳಿದಾರರಿಗೆ ಭೂಮಿ ಒಡೆತನ ನೀಡಲು ತೀರ್ಮಾನಿಸಲಾಗಿತ್ತು. ಅದಕ್ಕೂ ಹಿಂದೆ ನಮೂನೆ-50 ಹಾಗೂ ನಮೂನೆ-53 ರಡಿ ಅರ್ಜಿ ಸಲ್ಲಿಸಿದ್ದವರಿಗೂ ಮತ್ತೆ ನಮೂನೆ 57 ರಡಿ ಅರ್ಜಿ ಸಲ್ಲಿಸಿ ಕಾಲಾವಕಾಶ ಸಹ ವಿಸ್ತರಿಸಲಾಗಿದೆ. ಈ ನಿಯಮದಡಿ ಲಕ್ಷಾಂತರ ಅರ್ಜಿಗಳು ಸಲ್ಲಿಕೆಯಾಗಿವೆ.

ಜತೆಗೆ, ನಗರ ಹಾಗೂ ಗ್ರಾಮೀಣ ಭಾಗದಲ್ಲಿ ಸರ್ಕಾರಿ ಜಾಗದಲ್ಲಿ ಮನೆ ನಿರ್ಮಿಸಿಕೊಂಡಿರುವ ಬಡವರಿಗೆ ಸಕ್ರಮಗೊಳಿಸಲು ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 94 ಸಿ ಹಾಗೂ 94 ಸಿಸಿ ಅಡಿ ಅವಕಾಶ ಕಲ್ಪಿಸಿದ್ದು ಅದರಡಿಯೂ ಸಾಕಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ.

ಈ ಎರಡೂ ಅರ್ಜಿದಾರರು ಬಳಸುತ್ತಿ...

## ವಸತಿ ಮೊದಲ ಆದ್ಯತೆ

**ಡೀಮ್ಡ್ ಫಾರೆಸ್ಟ್ ಎಂದು ಪರಿಗಣಿಸಿರುವ 9.50 ಲಕ್ಷ ಹೆಕ್ಟೇರ್ ಪೈಕಿ 6 ಲಕ್ಷ ಹೆಕ್ಟೇರ್ ಕಂದಾಯ ಇಲಾಖೆಗೆ ಮರು ಹಸ್ತಾಂತರವಾದರೆ ಪ್ರವಾಹ ಪೀಡಿತ ಪ್ರದೇಶಗಳಲ್ಲಿ ನಿರಂತರ ಸಮಸ್ಯೆಗೆ ತುತ್ತಾಗುವ ಕುಟುಂಬಗಳಿಗೆ ಶಾಶ್ವತವಾಗಿ ವಸತಿ ಸೌಲಭ್ಯ ಒದಗಿಸುವುದು ನಮ್ಮ ಮೊದಲ ಆದ್ಯತೆ ಎಂದು ಕಂದಾಯ ಸಚಿವ ಆರ್.ಅಶೋಕ ತಿಳಿಸಿದ್ದಾರೆ. ಜತೆಗೆ, 94 ಸಿ, 94 ಸಿಸಿ, ನಮೂನೆ 57 ರಡಿ ಅರ್ಜಿ ಸಲ್ಲಿಸಿ ವರ್ಷಗಳಿಂದ ಕಾಯುತ್ತಿರುವ ಬಡವರು, ರೈತರಿಗೂ ಭೂ ಒಡೆತನ ಸಿಗಲಿದೆ. ಕರಾವಳಿ ಹಾಗೂ ಮಲೆನಾಡು ಭಾಗದ ಸಮಸ್ಯೆಯೂ ನಿವಾರಣೆಯಾಗಲಿದೆ ಎಂದಿದ್ದಾರೆ.**

ಜಮೀನಿನ ಪೈಕಿ ಬಹುತೇಕ ಡೀಮ್ಡ್ ಫಾರೆಸ್ಟ್ ಎಂದು ಪರಿಗಣಿಸಲಾಗಿದೆ. ಹೀಗಾಗಿ, ಆರು ಲಕ್ಷ ಹೆಕ್ಟೇರ್ ಜಮೀನು ಕಂದಾಯ ಇಲಾಖೆಗೆ ಹಸ್ತಾಂತರವಾಗುವುದರಿಂದ ಆ ಅರ್ಜಿಗಳು ಇತ್ಯರ್ಥಗೊಳ್ಳಲಿವೆ ಎಂದು ಕಂದಾಯ ಇಲಾಖೆ ಅಧಿಕಾರಿಗಳು ತಿಳಿಸುತ್ತಾರೆ.

▶ 7ನೇ ಪುಟಕ್ಕೆ